# ಬ್ರಹ್ಮಗಿರಿಯಲ್ಲಿ ಇಂಗು ಗುಂಡಿ ಮುಚ್ಚಿ

■ **ವಿಕ ಸುದ್ದಿಲೋಕ** ಮಡಿಕೇರಿ

ಆಗಸ್ಟ್‌ನಲ್ಲಿ ತಲಕಾವೇರಿಯ ಗಜಗಿರಿ ಬೆಟ್ಟದಲ್ಲಿ ಸಂಭವಿಸಿದ ಭೂಕುಸಿತ ಸಂಬಂಧ ಸ್ಥಳ ಅಧ್ಯಯನ ನಡೆಸಿದ್ದ ಭಾರತೀಯ ಸರ್ವೇಕ್ಷಣಾ ಸಂಸ್ಥೆ(ಜಿಎಸ್‌ಐ) ವಿಜ್ಞಾನಿಗಳು ಹಾಗೂ ಅಧಿಕಾರಿಗಳೊಂದಿಗೆ ತಲಕಾವೇರಿಯ ಅರಣ್ಯ ಮಂದಿರದಲ್ಲಿ ಸೋಮವಾರ ಸಭೆ ನಡೆಯಿತು.

## ಜಿಎಸ್‌ಐ ವಿಜ್ಞಾನಿಗಳ ಖಚಿತ ಅಭಿಮತ



ತಲಕಾವೇರಿಯ ಗಜಗಿರಿ ಬೆಟ್ಟದಲ್ಲಿ ಸಂಭವಿಸಿದ ಭೂಕುಸಿತ ಸ್ಥಳಕ್ಕೆ ಜಿಎಸ್‌ಐ ವಿಜ್ಞಾನಿಗಳು ಭೇಟಿ ನೀಡಿ ಪರಿಶೀಲಿಸಿದರು.

ಸಭೆಯಲ್ಲಿ ಮಾತನಾಡಿದ ಜಿಐಎಸ್ ಪ್ರತಿನಿಧಿ ಅಯಿಜಾಜ್ (ಜಮ್ಮು ಮತ್ತು ಕಾಶ್ಮೀರ), ಕಮಲ್ ಕುಮಾರ್ (ಉತ್ತರ ಪ್ರದೇಶ) ಮತ್ತು ಸೆಂಥಿಲ್ ಕುಮಾರ್ (ತಮಿಳುನಾಡು) ಬ್ರಹ್ಮಗಿರಿ ವ್ಯಾಪ್ತಿಯಲ್ಲಿ ಯಾವುದೇ ಕಾರಣಕ್ಕೂ ಇಂಗುಗುಂಡಿ ತೆಗೆಯಬಾರದು. ಮರಗಿಡಗಳನ್ನು ಹೆಚ್ಚು ಬೆಳೆಸಬೇಕು. ಬ್ರಹ್ಮಗಿರಿ ಬೆಟ್ಟದಲ್ಲಿ ನೀರು ಇಂಗದಂತೆ ತಡೆಯಬೇಕು. ಎಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಅನೀಸ್ ಕಣ್ಮಣಿ ಜಾಯ್ ಮಾತನಾಡಿ, ಭೂ ಕುಸಿತ ತಡೆಯುವ ನಿಟ್ಟಿನಲ್ಲಿ ಅಗತ್ಯ ಮುನ್ನೆಚ್ಚರಿಕೆ ವಹಿಸಬೇಕಿದೆ, ಮಳೆಗಾಲದ ಅವಧಿಯಲ್ಲಿ ಸೂಕ್ಷ್ಮ ಪ್ರದೇಶಗಳಲ್ಲಿ ವಾಸಿಸುವ ಜನರನ್ನು ಸ್ಥಳಾಂತರಿಸುವುದು. ಅವರಿಗೆ ಶಾಶ್ವತವಾಗಿ ಪುನರ್‌ವಸತಿ ಕಲ್ಪಿಸಲು ಅಗತ್ಯ ಕ್ರಮ ಕೈಗೊಳ್ಳುವುದು, ಭಾಗಮಂಡಲ ಗ್ರಾಪಂನಲ್ಲಿ 'ಪ್ರಕೃತಿ ವಿಕೋಪ ನಿರ್ವಹಣಾ ಸಮಿತಿ' ಇದ್ದು ಈ ಸಮಿತಿ ಗಮನಕ್ಕೆ ತಂದು ಯಾವುದೇ ರೀತಿಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುವಂತಾಗಬೇಕು ಎಂಬ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು.

### ವಿಜ್ಞಾನಿಗಳ ಸಲಹೆ

- ಇಂಗು ಗುಂಡಿ ನಿಷೇಧಿಸಿ
- ಮರಗಿಡಗಳನ್ನು ಬೆಳೆಸಿ
- ಅಭಿವೃದ್ಧಿ ಕಾಮಗಾರಿ ಕುರಿತು ನಿಗಾ ಇಡಿ
- ಪ್ರಕೃತಿ ವಿಕೋಪ ನಿರ್ವಹಣಾ ಸಮಿತಿ ರಚಿಸಿ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಂದಾಯ, ಅರಣ್ಯ, ಲೋಕೋಪಯೋಗಿ, ಗಣಿ ಮತ್ತು ಭೂ ವಿಜ್ಞಾನ, ಭೂ ದಾಖಲೆಗಳ ಇಲಾಖೆಗಳು ಪ್ರಕೃತಿ ವಿಕೋಪ ನಿರ್ವಹಣಾ ಸಮಿತಿಯಲ್ಲಿದ್ದು ಈ ಸಮಿತಿಯೊಂದಿಗೆ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳುವಂತಾಗಬೇಕು ಎಂಬ ಬಗ್ಗೆ ಸಭೆಯಲ್ಲಿ ನಿರ್ಧರಿಸಲಾಯಿತು.

ಜಿಲ್ಲೆಯ ಪ್ರತಿ ಗ್ರಾಪಂಗಳಲ್ಲೂ ಪ್ರಕೃತಿ ವಿಕೋಪ ನಿರ್ವಹಣಾ ಸಮಿತಿ ರಚಿಸಲಾಗಿದ್ದು ಆ ಸಮಿತಿಯಲ್ಲಿ ಆಯಾಯ ಗ್ರಾಪಂ ವ್ಯಾಪ್ತಿಯಲ್ಲಿ ಕೆಲವು ನಿರ್ಧಾರಗಳನ್ನು ತೆಗೆದುಕೊಳ್ಳಬೇಕಿದೆ ಎಂದು ಜಿಪಂ ಸಿಇಒ ಭನ್ವರ್ ಸಿಂಗ್ ಮೀನಾ ಸಲಹೆ ನೀಡಿದರು.

ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ನಿಲೇಶ್ ಸಿಂಧೆ ಮಾತನಾಡಿ, ಇಂಗುಗುಂಡಿ ತೆಗೆದಿರುವುದರಿಂದ ಭೂ ಕುಸಿತ ಉಂಟಾಯಿತು ಎಂಬುದು ಕೇಳಿ ಬರುತ್ತದೆ. ಆದ್ದರಿಂದ ಈ ಬಗ್ಗೆ ಮಾಹಿತಿ ಪಡೆದು ಮುಂದಿನ ಮಳೆಗಾಲದೊಳಗೆ ಇಂಗುಗುಂಡಿಗಳನ್ನು ಮುಚ್ಚುವಂತಾಗಬೇಕು ಎಂದು ತಿಳಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯಿಂದ ಭೂ ಕುಸಿತ ಸಂಬಂಧಿಸಿದಂತೆ ಯಾವ ಯಾವ ಗ್ರಾಪಂ ವ್ಯಾಪ್ತಿಯಲ್ಲಿ ಸಮಸ್ಯೆ ಇದೆ. ಪಟ್ಟಿ ಮಾಡಿ ಅಂತಹ ಕಡೆಗಳಲ್ಲಿ ಯಾವುದೇ ರೀತಿಯ ಕಾಮಗಾರಿ ಕೈಗೆತ್ತಿಕೊಳ್ಳಬೇಕು ಎಂಬ ಬಗ್ಗೆ ಚರ್ಚಿಸಿ ನಿರ್ಧರಿಸಬೇಕು ಎಂದರು.

ಲೋಕೋಪಯೋಗಿ ಇಲಾಖೆ ಕಾರ್ಯಪಾಲಕ ಎಂಜಿನಿಯರ್ ಮದನ್ ಮೋಹನ್, ಗಜಗಿರಿ ಬೆಟ್ಟದ ತಲಕಾವೇರಿಗೆ ತೆರಳುವ ರಸ್ತೆ ಕೆಳಭಾಗದಲ್ಲಿ ತಡೆಗೋಡೆ ನಿರ್ಮಾಣಕ್ಕೆ ಲೋಕೋಪಯೋಗಿ ಇಲಾಖೆಯಿಂದ 75 ಲಕ್ಷ ರೂ.ಗೆ ಆಡಳಿತಾತ್ಮಕ ಅನುಮೋದನೆ ದೊರೆತಿದ್ದು ಟೆಂಡರ್ ಹಂತದಲ್ಲಿದೆ ಎಂದರು.